## 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕುಂದಾಪುರ

ಸಿ.ಸಿ ನಂಬ್ರಃ **543/2017**

ಚಾಸಾ-5 ಫ್ರಾಸಾ-5

| | | |
|---|---|---|
| ಸಾಕ್ಷಿದಾರರ ಹೆಸರು | : | ಚಂದ್ರ ಶೇಖರ |
| ತಂದೆಯ ಹೆಸರು | : | ಡಿಕಣ್ಣ |
| ಫ್ರಾಯ | : | 55 ವರ್ಷ |
| ಉದ್ಯೋಗ | : | ಚಾಲಕ |
| ವಾಸ | : | ಕೊಲ್ಲೂರು |

ದಿನಾಂಕಃ **30-08-2024** ಸಾಕ್ಷಿಗೆ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ದಿನಾಂಕ 14-01-2016 ರಿಂದ ದಿನಾಂಕ 16-01-2016 ರವರೆಗೆ ಮಾರಣಕಟ್ಟೆಯಲ್ಲಿ ಜಾತ್ರೆ ಇದ್ದು, ನಾನು ಜಾತ್ರೆ ಪ್ರಯುಕ್ತ ಬಾಡಿಗೆಗೆ ಆಟೋದಲ್ಲಿ ಹೋಗಿದ್ದು, ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ಆ ಸಮಯದಲ್ಲಿ ಬೇರೆ ಯಾರು ಇದ್ದರು ಎಂದು ನನಗೆ ನೆನಪಿಲ್ಲ. ಸಾಕ್ಷಿಗೆ ನಿ.ಪಿ.2 ಮತ್ತು ನಿ.ಪಿ.3 ನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿದ ಮೇರೆಗೆ ಅದರಲ್ಲಿರುವ ಸಹಿಯನ್ನು ನಿ.ಪಿ.2(ಸಿ) ಮತ್ತು ನಿ.ಪಿ.3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪೋಟೋದಲ್ಲಿ ತಾವು ಇರುವುದಾಗಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ.4 ಎಂದು ಗುರುತಿಸಲಾಗಿದೆ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ಭಾಗಶಃ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ದಿನಾಂಕ 16-01-2016 ರಂದು ನಾನು ಜಾತ್ರೆಗೆ ಹೋಗಿದ್ದೆ ಎಂದರೆ ಸರಿ. ಚಿತ್ತೂರು - ಮಾರಣಕಟ್ಟೆ ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಆಗಿತ್ತು ಎಂದರೆ ಸರಿ. ಪೊಲೀಸರು ಗಲಾಟೆ ಆದ ಬಗ್ಗೆ ಸಹಿ ಮಾಡಲು ಹೇಳಿರುತ್ತಾರೆ. ಚಾಸಾ 1 ರವರು ಘಟನೆಯ ಜಾಗ ತೋರಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಘಟನಾ ಸ್ಥಳದಲ್ಲಿ ಮಹಜರನ್ನು ಬರೆದಿದ್ದು, ನಂತರ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿ. ಬೆಳಿಗ್ಗೆ 11.15 ರಿಂದ 12

ಗಂಟೆ ತನಕ ಮಹಜರು ಮಾಡಿರುತ್ತಾರೆ ಎಂದರೆ ಸರಿ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಹೆಚ್. ಎ.ಎಸ್. ರವರಿಂದಃ

ಮಹಜರಿನಲ್ಲಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಹೇಳಲು ಸಾಧ್ಯವಿಲ್ಲ. ಪೊಲೀಸರ ಮೇಲಿನ ವಿಶ್ವಾಸದಿಂದ ಮಹಜರಿಗೆ ಸಹಿ ಮಾಡಿದ್ದು, ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ ಎಂದರೆ ಸರಿ. ನಿ.ಪಿ.4 ರ ಪೋಟೋವನ್ನು ಯಾವ ಕಾರಣಕ್ಕೆ ತೆಗೆದಿದ್ದಾರೆ ಎಂದು ಗೊತ್ತಿಲ್ಲ.

ಮರು ವಿಚಾರಣೆಃ ಇಲ್ಲ

ಓದಿ ಹೇ. ಕೇ. ಸರಿ ಇದೆ.

ನನ್ನ ಹೇ. ಮೇ. ಬೆ. ಮಾಡಲಾಗಿದೆ

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ.